# JANUARY 3,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ರಾಜ್ಯ ಭೇಟಿಯ ನಿಮಿತ್ತ ಇಂದು ಬೆಳಗ್ಗೆ ಬೆಂಗಳೂರು ನಗರಕ್ಕೆ ತಲುಪಿದ್ದು, ಬೆಂಗಳೂರಿನ ನಿಮ್ಹಾನ್ಸ್‌ನ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಪ್ರಸ್ತುತ ಸಂಸ್ಥೆಯ ಸುವರ್ಣ ಮಹೋತ್ಸವ ವರ್ಷಾಚರಣೆ ಕಾರ್ಯಕ್ರಮ ಪ್ರಗತಿಯಲ್ಲಿದೆ. ಕಾರ್ಯಕ್ರಮದ ನಂತರ ಬೆಳಗಾವಿಗೆ ಭೇಟಿ ನೀಡಲಿರುವ ರಾಷ್ಟ್ರಪತಿಯವರು, ಕೆ.ಎಲ್.ಇ. ಸಂಸ್ಥೆಯಲ್ಲಿ, ಅತ್ಯಾಧುನಿಕ ತಂತ್ರಜ್ಞಾನ ವ್ಯವಸ್ಥೆಯೊಂದಿಗೆ ನಿರ್ಮಾಣಗೊಂಡ, ಡಾಕ್ಟರ್ ಸಂಪತ್‌ಕುಮಾರ ಶಿವಣಗಿ ಕ್ಯಾನ್ಸರ್ ಆಸ್ಪತ್ರೆಯನ್ನು ಉದ್ಘಾಟಿಸಲಿದ್ದಾರೆ.  ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ಜೆ.ಪಿ. ನಡ್ಡಾ ಸಹಿತ ಗಣ್ಯರು ಭಾಗವಹಿಸಲಿದ್ದಾರೆ.

<><><>

ಗಡಿ ಭಾಗದ ಪ್ರದೇಶಗಳಲ್ಲಿ ಕನ್ನಡ ಉಳಿಸುವ ಕಾರ್ಯವನ್ನು ಅಲ್ಲಿನ ಕನ್ನಡ ಸಂಘಟನೆಗಳು ಮಾಡುತ್ತಿವೆ. ಮಹಾರಾಷ್ಟ್ರದ ಗಡಿಭಾಗದ ಕನ್ನಡ ಶಾಲೆಗಳಲ್ಲಿ ನಲಿ–ಕಲಿ ಪುಸ್ತಕಗಳನ್ನು ಶಿಕ್ಷಣ ಇಲಾಖೆ ಮೂಲಕ ವಿತರಿಸಲಾಗಿದೆ. ಗೋವಾದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಜಾಗೆ ಗೊತ್ತುಪಡಿಸಲಾಗಿದೆ ಎಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಹೇಳಿದರು. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ರಾ.ಹ ದೇಶಪಾಂಡೆ ಸಭಾಭವನದಲ್ಲಿ 'ಕನ್ನಡ ದಿನದರ್ಶಿಕೆ' ಅನಾವರಣಗೊಳಿಸಿ ಅವರು ಮಾತನಾಡಿದರು. ಕಾಸರಗೋಡು, ಹೊಸೂರು, ಜತ್ತ, ಸೊಲ್ಲಾಪುರಗಳಲ್ಲಿ ಕನ್ನಡದ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕನ್ನಡ ಉಳಿಸಿ ಬೆಳೆಸುವಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲಾಗುವುದು, ಗಡಿಭಾಗದ ಕೆಲ ಕನ್ನಡ ಶಾಲೆಗಳಲ್ಲಿ ಮೂಲಸೌಕರ್ಯಗಳ ಕೊರತೆ ಇದ್ದು, ಮೂಲಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡಲಾಗುತ್ತಿದೆ ಎಂದರು

<><><>

ಬೈಟ್: ಸೋಮಣ್ಣ ಬೇವಿನಮರದ 31 ಸೆಕೆಂದುಗಳು

<><><>

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯನ್ನು ವಿಭಜಿಸಿ ಪ್ರತ್ಯೇಕವಾಗಿ ಧಾರವಾಡ ಮಹಾನಗರ ಪಾಲಿಕೆಯನ್ನು ರಚಿಸಲು ನಡೆದ ಸಂಪುಟ ಸಭೆ ನಿರ್ಣಯ ಸ್ವಾಗತಾರ್ಹವಾಗಿದೆ ಎಂದು ಕಾರ್ಮಿಕ ಖಾತೆ ಸಚಿವ ಹಾಗೂ ಧಾರವಾಡ

ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು –ಧಾರವಾಡ ನಗರವು ನಾಡಿಗೆ ಮೂರು ಜ್ಞಾನ ಪೀಠ ಪ್ರಶಸ್ತಿ ವಿಜೇತರನ್ನು ನೀಡಿದೆ. ವಿದ್ಯಾಕಾಶಿ ಎನಿಸಿರುವ ಧಾರವಾಡ ನಗರವು ಸಾಂಸ್ಕೃತಿಕವಾಗಿ, ಶೈಕ್ಷಣಿಕವಾಗಿ ಬಹುದೊಡ್ಡ ಕೊಡುಗೆಯನ್ನು ನೀಡಿದೆ, ಧಾರವಾಡ ನಗರವನ್ನು ಪ್ರತ್ಯೇಕ ಮಹಾನಗರ ಪಾಲಿಕೆಯನ್ನಾಗಿಸಿ, ನಗರದ ಸರ್ವತೋಮುಖ ಅಭಿವೃದ್ಧಿಗೆ ನಾಂದಿ ಹಾಡಿದ ರಾಜ್ಯ ಸರ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಅವರು ಹಾಗೂ ಸಂಪುಟದ ಎಲ್ಲ ಸಹೋದ್ಯೋಗಿಗಳಿಗೂ ಧಾರವಾಡಿಗರ ಪರವಾಗಿ ತುಂಬು ಹೃದಯದ ಧನ್ಯವಾದಗಳು ಎಂದು ಹೇಳಿದ್ದಾರೆ.

<><><>

ಧಾರವಾಡ ನಗರಕ್ಕೆ, ಪ್ರತ್ಯೇಕ ಪಾಲಿಕೆ ಸ್ಥಾನಮಾನಕ್ಕೆ ಕ್ಯಾಬಿನೆಟ್ ಒಪ್ಪಿಗೆ ನೀಡಿರುವುದು ಸ್ವಾಗತಾರ್ಹ. ಬಹುದಿನಗಳ ಬೇಡಿಕೆ ಈಗ ಈಡೇರಿದ್ದು, ಹೋರಾಟಕ್ಕೆ ಸಂದ ಜಯವಾಗಿದೆ. ಬೇಡಿಕೆಗೆ ಸ್ಪಂದಿಸಿದ ಎಲ್ಲ ಜನಪ್ರತಿನಿಧಿಗಳಿಗೆ ಧನ್ಯವಾದ ಅರ್ಪಿಸುತ್ತೇನೆ ಎಂದು ಧಾರವಾಡ ಪ್ರತ್ಯೇಕ ಪಾಲಿಕೆ ಹೋರಾಟ ಅಭಿವೃದ್ಧಿ ವೇದಿಕೆ ಅಧ್ಯಕ್ಷ ವೆಂಕಟೇಶ ಮಾಚಕನೂರ ಹೇಳಿದರು.

<><><>

ಹೊಸ ವರ್ಷದ ಕೊಡುಗೆಯಾಗಿ ರಾಜ್ಯ ಸರಕಾರ ಧಾರವಾಡಕ್ಕೆ ಪ್ರತ್ಯೇಕ ಮಹಾನಗರ ಪಾಲಿಕೆ ಮಂಜೂರಾತಿ ನೀಡಿದ್ದು ಸ್ವಾಗತಾರ್ಹ, ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಂತ್ರಿಮಂಡಲದ ಸದಸ್ಯರು ಹಾಗೂ ಅವಳಿ ನಗರದ ಎಲ್ಲ ಶಾಸಕರಿಗೆ ಅಭಿನಂದನೆಗಳು ಎಂದು ಧಾರವಾಡ ಪ್ರತ್ಯೇಕ ಪಾಲಿಕೆ ಹೋರಾಟ ವೇದಿಕೆ ಅಧ್ಯಕ್ಷ ಮನೋಜ ಪಾಟೀಲ ಹೇಳಿದರು.

<><><>

ಧಾರವಾಡದ ಪದ್ಮಶ್ರೀ ಸಂಗೀತ ಪ್ರತಿಷ್ಠಾನದ ರಜತ ಮಹೋತ್ಸವ ಅಂಗವಾಗಿ ಪಂಡಿತ್ ಭೀಮಸೇನ ಮಾಧವ ರಾಷ್ಟ್ರೀಯ ಸಂಗೀತೋತ್ಸವ, ಸ್ವರನಿಧಿ ರಾಷ್ಟ್ರೀಯ ಸಂಗೀತ ಪ್ರಶಸ್ತಿ ಪ್ರದಾನ ಸಮಾರಂಭವು ಇಂದು ಸಂಜೆ 4 ಗಂಟೆಗೆ ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿತವಾಗಿದೆ. ಅಂತಾರಾಷ್ಟ್ರೀಯ ಸಂಗೀತ ಕಲಾವಿದೆ ಸಂಗೀತಾ ಕಟ್ಟಿ ಕುಲಕರ್ಣಿ ಅವರಿಗೆ ಮಾಧವ ಸ್ವರನಿಧಿ ಪ್ರಶಸ್ತಿ ಪ್ರದಾನವಾಗಲಿದೆ. ಹಿರಿಯ ರಂಗಭೂಮಿ ಕಲಾವಿದರಾದ ಡಾಕ್ಟರ್ ಶಶಿಧರ ನರೇಂದ್ರ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

<><><>

ಕಾರ್ಮಿಕ ಇಲಾಖೆ ಯೋಜನೆ ಮೂಲಕ ಪತ್ರಿಕಾ ವಿತರಕರಿಗೆ ವಿಮಾ ಸೌಲಭ್ಯ ಪಡೆಯಲು ಇದ್ದ 60 ವರ್ಷದ ಮಿತಿಯನ್ನು 70 ವರ್ಷಕ್ಕೆ ಹೆಚ್ಚಳ ಮಾಡಿ ಅನುಕೂಲ ಕಲ್ಪಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹಾಗೂ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ಅಧ್ಯಕ್ಷ ಕೆ.ಶಂಭುಲಿಂಗ ಅವರು ಬೆಂಗಳೂರಿನಲ್ಲಿ ಅಭಿನಂದಿಸಿ, ಧನ್ಯವಾದ ತಿಳಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>